All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

07.07.2026  19.35 p.m.

<><><><>

ಮುಖ್ಯಾಂಶಗಳು

- ಉಪಗ್ರಹ ಉಡಾವಣಾ ತಂತ್ರಜ್ಞಾನ ಕ್ಷೇತ್ರದಲ್ಲಿ ಇಂಡೋನೇಷ್ಯಾಗೆ ಬೆಂಬಲ ನೀಡಲು ಭಾರತ ಸಿದ್ಧ - ಪ್ರಧಾನಿ ನರೇಂದ್ರ ಮೋದಿ
- ಕೇರಳಂನ ವಯನಾಡು ಜಿಲ್ಲೆಯಲ್ಲಿ ಭೂಕುಸಿತ: ಮೂರು ಮಂದಿ ಸಾವು, ಆರು ಜನರು ನಾಪತ್ತೆ
- ಅಮೆರಿಕ ಜೊತೆ ಅಂತಿಮ ಒಪ್ಪಂದ ಕುರಿತು ಮಾತುಕತೆ ನಡೆಸಲು ಇರಾನ್ ನಕಾರ
- ಫಿಫಾ ವಿಶ್ವಕಪ್ ಫುಟ್ಬಾಲ್: ೧೬ರ ಸುತ್ತಿನ ಪಂದ್ಯದಲ್ಲಿಂದು ಅರ್ಜೆಂಟೀನಾ- ಈಜಿಪ್ಟ್ ಮುಖಾಮುಖಿ

<><><><>

ಜಕಾರ್ತದಲ್ಲಿ ಇಂದು ಇಂಡೋನೇಷ್ಯಾ ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು. ಭಾರತ ಮತ್ತು ಇಂಡೋನೇಷ್ಯಾ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ಸಹಕಾರ ಬಲಪಡಿಸಲು ಅಪಾರ ಅವಕಾಶಗಳನ್ನು ಹೊಂದಿದೆ. ಭಾರತದ ೧೪೦ ಕೋಟಿ ಜನರು ಮತ್ತು ಇಂಡೋನೇಷ್ಯಾದ ೨೮ ಕೋಟಿ ಜನರು ಸಹಯೋಗದಲ್ಲಿ ಪ್ರಗತಿಯತ್ತ ಒಟ್ಟಾಗಿ ಮುನ್ನಡೆದಾಗ ಇತಿಹಾಸ ನಿರ್ಮಾಣವಾಗುತ್ತದೆ ಎಂದು ಅವರು ಪ್ರತಿಪಾದಿಸಿದರು. ಜಂಟಿ ಕಾರ್ಯಪಡೆಯ ಕಾರ್ಯವಿಧಾನದ ಮೂಲಕ ಭಯೋತ್ಪಾದನೆಯನ್ನು ಎದುರಿಸಲು ಉಭಯ ದೇಶಗಳೂ ನಿಕಟವಾಗಿ ಕಾರ್ಯನಿರ್ವಹಿಸುತ್ತಿವೆ. ಮುಕ್ತ ಮತ್ತು ಎಲ್ಲರನ್ನೂ ಒಳಗೊಂಡ ಇಂಡೋ ಪೆಸಿಫಿಕ್‌ಗೆ ತನ್ನ ಬದ್ಧತೆಯನ್ನು ಭಾರತ ಪುನರುಚ್ಚರಿಸುತ್ತದೆ. ಈ ಪ್ರದೇಶದಲ್ಲಿ ಸಂಚಾರದ ಸ್ವಾತಂತ್ರ್ಯವನ್ನು ಖಾತರಿಪಡಿಸುವುದು ಅಗತ್ಯವಿದೆ ಎಂದು ಹೇಳಿದರು. ಉಪಗ್ರಹ ಉಡಾವಣಾ ತಂತ್ರಜ್ಞಾನ ಕ್ಷೇತ್ರದಲ್ಲಿ ಇಂಡೋನೇಷ್ಯಾಗೆ ಬೆಂಬಲ ನೀಡಲು ಭಾರತ ಸಿದ್ಧವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><><><>

ಇಂಡೋನೇಷ್ಯಾದಲ್ಲಿ ವಿದೇಶಿ ಕ್ಯಾಂಪಸ್ ಸ್ಥಾಪಿಸಲು ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೆಜ್ಮೆಂಟ್-ಐಐಎಂಗೆ ಅನುಮೋದನೆ ನೀಡುವುದರೊಂದಿಗೆ ಭಾರತದ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಸೇರ್ಪಡೆಯಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ಇಂಡೋನೇಷ್ಯಾ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ಪ್ರಸ್ತಾವನೆಯನ್ನು ಅನುಮೋದಿಸಿದ್ದಾರೆ. ಇಂತಹ ಪ್ರತಿಷ್ಠಿತ ಸಂಸ್ಥೆಯ ವಿದೇಶಿ ಕ್ಯಾಂಪಸ್

ಸ್ಥಾಪನೆಯು ಭಾರತದ ಜ್ಞಾನ ಪರಂಪರೆ ಮತ್ತು ಶಿಕ್ಷಣ ವ್ಯವಸ್ಥೆಯನ್ನು ಜಾಗತೀಕರಣಗೊಳಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು.

<><><>

ನವದೆಹಲಿಯಲ್ಲಿ ಇಂದು ೨೦ ಸಾವಿರಕ್ಕೂ ಹೆಚ್ಚು ಕೃಷಿ ಉದ್ಯಮಿಗಳು ಮತ್ತು ೨೦ ಲಕ್ಷ ರೈತರನ್ನು ಸಬಲೀಕರಣಗೊಳಿಸುವ ಗುರಿ ಹೊಂದಿರುವ 'ಪ್ರಗತಿ ಯೋಜನೆ'ಯನ್ನು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉದ್ಘಾಟಿಸಿದರು. ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಚಿವರು, ವಿಕಸಿತ ಭಾರತ ದೃಷ್ಟಿಕೋನ ಸಾಧಿಸಲು ಕೃಷಿ, ಸಮೃದ್ಧ ಗ್ರಾಮಗಳು ಮತ್ತು ಸಮೃದ್ಧ ರೈತರನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ. ಈ ದೃಷ್ಟಿಕೋನವನ್ನು ಸಾಧಿಸಲು ಸರ್ಕಾರ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ. ಈ ಪ್ರಯತ್ನಗಳಿಗೆ ಇತರ ಸಂಸ್ಥೆಗಳು ಕೈಜೋಡಿಸಿದಾಗ ಕೆಲಸ ವೇಗ ಪಡೆಯುತ್ತದೆ ಎಂದು ಹೇಳಿದರು. 'ಪ್ರಗತಿ ಯೋಜನೆ'ಯಡಿ ೨೮ ಸಾವಿರ ಸಣ್ಣ ಉದ್ಯಮಿಗಳಿಗೆ ತರಬೇತಿ ನೀಡಲು ಸರ್ಕಾರ ನಿರ್ಧರಿಸಿದೆ. ಈ ಉದ್ಯಮಿಗಳು ಒಂದು ಹಳ್ಳಿಯೊಳಗೆ ಕೆಲಸ ಮಾಡುತ್ತಾರೆ ಮತ್ತು ಗ್ರಾಮದ ಕೃಷಿಯನ್ನು ಪರಿವರ್ತಿಸಲು ೧೦೦ ರಿಂದ ೨೦೦ ರೈತರೊಂದಿಗೆ ಸಹಕರಿಸುತ್ತಾರೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

<><><>

ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಬಹ್ರೇನ್ ಉಪ ಪ್ರಧಾನಿ ಖಾಲಿದ್ ಬಿನ್ ಅಬ್ದುಲ್ಲಾ ಅಲ್ ಖಲೀಫಾ ಅವರನ್ನು ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದ್ದಾರೆ. ಈ ಕುರಿತು ಮಾಹಿತಿ ಹಂಚಿಕೊಂಡಿರುವ ಡಾ. ಎಸ್. ಜೈಶಂಕರ್, ಸಭೆಯಲ್ಲಿ ಉಭಯ ದೇಶಗಳ ನಡುವಿನ ವಿವಿಧ ವಲಯಗಳ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಮುಂದುವರೆಸುವ ಕುರಿತು ಸುದೀರ್ಘವಾಗಿ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ. ಇದರೊಂದಿಗೆ, ಪ್ರಚಲಿತ ಪ್ರಾದೇಶಿಕ ವಿದ್ಯಮಾನಗಳು ಮತ್ತು ಪರಿಸ್ಥಿತಿಯ ಕುರಿತಾಗಿಯೂ ಉಭಯ ನಾಯಕರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

<><><>

ಜಮ್ಮು-ಶ್ರೀನಗರ ಕಾರಿಡಾರ್‌ನಲ್ಲಿ ೨೮ ಸುರಂಗಗಳು, ೧೪ ಕಿಲೋಮೀಟರ್ ವಿಸ್ತೀರ್ಣದ ಜೋಜಿಲಾ ಸುರಂಗ, ಕೇದಾರ್‌ನಾಥ್ ರೋಪ್‌ವೇ ಮತ್ತು ಕಾಶ್ಮೀರದಿಂದ ಕನ್ಯಾಕುಮಾರಿ ವರೆಗೆ ವರ್ಧಿತ ರಸ್ತೆ ಸಂಪರ್ಕ ಸೇರಿದಂತೆ ಪ್ರಮುಖ ಮೂಲಸೌಕರ್ಯ ಯೋಜನೆಗಳು ಸಂಪರ್ಕವನ್ನು ಬಲಪಡಿಸುತ್ತಿವೆ. ಅಲ್ಲದೇ ದೇಶದ ಅಭಿವೃದ್ಧಿಯನ್ನು ವೇಗಗೊಳಿಸುತ್ತಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ವಿಕಸಿತ ಭಾರತ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಮೂಲಸೌಕರ್ಯ ನೇತೃತ್ವದ ಬೆಳವಣಿಗೆಯ ಮೇಲೆ ಸರ್ಕಾರ ಗಮನಹರಿಸುತ್ತಿದೆ. ರಾಜಕೀಯವು ಸಾಮಾಜಿಕ, ಆರ್ಥಿಕ ಪರಿವರ್ತನೆಯ ಸಾಧನವಾಗಿ ಕಾರ್ಯನಿರ್ವಹಿಸಬೇಕು ಎಂದು ಅಭಿಪ್ರಾಯಪಟ್ಟರು.

<><><>

ಉಕ್ಕಿನ ಉದ್ಯಮದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಮತ್ತು ವಲಯದಲ್ಲಿ ಬೆಳವಣಿಗೆಯನ್ನು ಹೆಚ್ಚಿಸಲು ಕೇಂದ್ರ ಸರ್ಕಾರ, ಉಕ್ಕು ಉದ್ಯಮದೊಂದಿಗೆ ನಿಕಟವಾಗಿ ಕೆಲಸ ಮಾಡಲು ಬದ್ಧವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಸಚಿವ ಪಿಯೂಷ್ ಗೋಯಲ್ ಸಭೆ ನಡೆಸಿದರು. ಸಭೆಯಲ್ಲಿ ಉಕ್ಕು, ಸ್ಟೇನ್‌ಲೆಸ್ ಸ್ಟೀಲ್ ಮತ್ತು ಮೆಟ್‌ಕೋಕ್ ಕೈಗಾರಿಕೆಗಳ ಪ್ರಮುಖ ನಾಯಕರೊಂದಿಗೆ, ವಲಯದ ಸ್ಪರ್ಧಾತ್ಮಕತೆಯನ್ನು ಬಲಪಡಿಸುವ ಮತ್ತು ಹೊಸ ಬೆಳವಣಿಗೆಯ ಅವಕಾಶಗಳನ್ನು ತೆರೆಯುವ ಕುರಿತು ರಚನಾತ್ಮಕ ಚರ್ಚೆಗಳು ನಡೆದಿವೆ. ಬಲವಾದ ಮತ್ತು ಹೆಚ್ಚು ಸ್ವಾವಲಂಬಿ ಭಾರತವನ್ನು ನಿರ್ಮಿಸಲು ಸರ್ಕಾರ, ಉದ್ಯಮದೊಂದಿಗೆ ನಿಕಟ ಸಹಯೋಗ ಬೆಳೆಸಲು, ಅದರ ಆಕಾಂಕ್ಷೆಗಳನ್ನು ಬೆಂಬಲಿಸಲು ಮತ್ತು ಈ ವಲಯಗಳಲ್ಲಿ ಬಲವಾದ ಬೆಳವಣಿಗೆಯನ್ನು ಹೆಚ್ಚಿಸಲು ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಸಚಿವ ಪಿಯೂಷ್ ಗೋಯಲ್ ಪುನರುಚ್ಚರಿಸಿದರು.

<><><><>

ಕೇರಳಂನ ವಯನಾಡು ಜಿಲ್ಲೆಯ ಮೆಪ್ಪಾಡಿ ಬಳಿಯ ಕಲ್ಲಾಡಿಯಲ್ಲಿ ವಯನಾಡು ಸುರಂಗ ರಸ್ತೆ ಯೋಜನೆಯ ನಿರ್ಮಾಣ ಸ್ಥಳದಲ್ಲಿ ಇಂದು ಸಂಭವಿಸಿದ ಭೀಕರ ಮಣ್ಣು ಕುಸಿತದಲ್ಲಿ ಮೂವರು ಮೃತಪಟ್ಟಿದ್ದು, ೬ ಮಂದಿ ಕಾಣೆಯಾಗಿದ್ದಾರೆ. ಅವಶೇಷಗಡಿ ಸಿಲುಕಿದ ಏಳು ಮಂದಿ ಕಾರ್ಮಿರನ್ನು ರಕ್ಷಿಸಿದ್ದು, ಸ್ಥಳೀಯ ಆಸ್ಪತ್ರಗೆ ದಾಖಲಿಸಲಾಗಿದೆ. ನಿರಂತರ ಮತ್ತು ಧಾರಾಕಾರ ಮಳೆಯಿಂದಾಗಿ ನಿರ್ಮಾಣ ಸ್ಥಳದಲ್ಲಿ ಭೂಕುಸಿತ ಸಂಭವಿಸಿದೆ ಎಂದು ಕೇರಳಂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ತಿಳಿಸಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಕೇರಳಂ ಮುಖ್ಯಮಂತ್ರಿ ವಿ.ಡಿ.ಸತೀಸನ್, ವಯನಾಡು ಸುರಂಗ ನಿರ್ಮಾಣ ಸ್ಥಳದಲ್ಲಿ ಉಂಟಾದ ಮಣ್ಣು ಕುಸಿತ ದುರದೃಷ್ಟಕರ ಘಟನೆಯಾಗಿದೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳ ಎಚ್ಚರಿಕೆಗಳ ನಂತರವೂ ಅಗೆದ ಮಣ್ಣನ್ನು ತೆಗೆದುಹಾಕುವಂತೆ ಅಧಿಕಾರಿಗಳ ನಿರ್ದೇಶನಗಳನ್ನು ಪಾಲಿಸಲು ಗುತ್ತಿಗೆದಾರರು ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ರಕ್ಷಣಾ ಕಾರ್ಯಚರಣೆಗಾಗಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ರಾಜ್ಯ ಪೊಲೀಸ್ ಮತ್ತು ಅಗ್ನಿಶಾಮಕ ಹಾಗೂ ರಕ್ಷಣಾ ಸೇವೆಗಳ ತಂಡಗಳನ್ನು ನಿಯೋಜಿಸಲಾಗಿದೆ. ನಿರಂತರ ಮಳೆ ಮತ್ತು ಮಣ್ಣಿನ ಸ್ವರೂಪವು ರಕ್ಷಣಾ ಕಾರ್ಯಚರಣೆಗೆ ಅಡ್ಡಿಯಾಗುತ್ತಿದೆ ಎಂದು ತಿಳಿಸಿದರು. ಈ ನಡುವೆ ಭಾರತೀಯ ಹವಾಮಾನ ಇಲಾಖೆಯು ವಯನಾಡು ಮತ್ತು ಕಲ್ಲಿಕೋಟೆ ಪ್ರದೇಶಗಳಲ್ಲಿ ರೆಡ್ ಅಲರ್ಟ್ ಘೋಷಿಸಿದ್ದು, ಈ ಭಾಗದಲ್ಲಿ ಅತಿಹೆಚ್ಚು ಮಳೆಯಾಗುವ ಮುನ್ಸೂಚನೆ ನೀಡಿದೆ.

<><><><>

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗಳ ನಂತರ ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಘ್ಚಿ ಅವರು, ಅಮೆರಿಕ ಜೊತೆ ಅಂತಿಮ ಒಪ್ಪಂದ ಕುರಿತು ಮಾತುಕತೆ ನಡೆಸಲು ದೃಢವಾಗಿ ನಿರಾಕರಿಸಿದ್ದಾರೆ.

ಇರಾನ್ ಮತ್ತು ಅಮೆರಿಕ ನಡುವಿನ ಒಪ್ಪಂದ ಉಲ್ಲೇಖಿಸಿ ಸಾಮಾಜಿಕ ಜಾಲತಾಣದಲ್ಲಿ ಅವರು, ಅಮೆರಿಕ ತನ್ನ ಬದ್ಧತೆಗಳನ್ನು ಪೂರೈಸುವವರೆಗೆ ಇರಾನ್ ಮಾತುಕತೆಗಳನ್ನು ಪ್ರಾರಂಭಿಸುವುದಿಲ್ಲ ಎಂದು ತಿಳಿಸಿದ್ದಾರೆ. ಇದಕ್ಕೂ ಮುನ್ನ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾತನಾಡಿ, ಇರಾನ್ ಜೊತೆ ಅಮೆರಿಕ ಒಪ್ಪಂದ ಮಾಡಿಕೊಳ್ಳುತ್ತದೆ. ಅಗತ್ಯವಿದ್ದರೆ ಇರಾನ್‌ನ ನಿರ್ಣಾಯಕ ಮೂಲಸೌಕರ್ಯಗಳ ಮೇಲೆ ಅಮೆರಿಕ ದಾಳಿ ನಡೆಸುತ್ತದೆ ಎಂದು ಹೇಳಿದ್ದರು. ಈ ಹೇಳಿಕೆಯನ್ನು ಇರಾನ್ ಬಲವಾಗಿ ಖಂಡಿಸಿತು.

<><><>

ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರು, ನವದೆಹಲಿಯಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಮನ್ಸುಖ್ ಮಾಂಡವೀಯ ಮತ್ತು ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಅವರೊಂದಿಗೆ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಮಾತನಾಡಿದ ಸಚಿವ ಜೆ.ಪಿ.ನಡ್ಡಾ, ಕ್ಷಯರೋಗ ನಿರ್ಮೂಲನೆ ಮಾಡಲು ಕೇಂದ್ರ ಸರ್ಕಾರ ಕಟಿಬದ್ಧವಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ಸಚಿವಾಲಯಗಳು ತಮ್ಮ ಪ್ರಯತ್ನಗಳನ್ನು ತೀವ್ರಗೊಳಿಸುವಂತೆ ಒತ್ತಾಯಿಸಿದರು. 'ಕ್ಷಯರೋಗ ಮುಕ್ತ ಭಾರತ' ಗುರಿ ಸಾಧಿಸುವಲ್ಲಿ ಯುವಕರ ಪಾತ್ರ ಮಹತ್ವದ್ದು, ರಾಷ್ಟ್ರವ್ಯಾಪಿ ಅಭಿಯಾನ ವೇಗಗೊಳಿಸಲು ಮೈ ಭಾರತ್, ರಾಷ್ಟ್ರೀಯ ಸೇವಾ ಯೋಜನೆ-ಎನ್‌ಎಸ್‌ಎಸ್ ಮತ್ತು ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್-ಎನ್‌ಸಿಸಿ ಯ ಸ್ವಯಂ ಸೇವಕರನ್ನು ಸಕ್ರಿಯವಾಗಿ ಸಜ್ಜುಗೊಳಿಸುವಂತೆ ಅವರು ಸಲಹೆ ನೀಡಿದರು.

<><><>

'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದಡಿ ದೆಹಲಿಯಲ್ಲಿ ೭೦ ಲಕ್ಷ ಸಸಿಗಳನ್ನು ನೆಡುವ ಅಭಿಯಾನಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೆಹಲಿಯ ಪರಿಸರವನ್ನು ಪರಿವರ್ತಿಸುವ ಗುರಿಯನ್ನು ಹೊಂದಿರುವ ಈ ಅಭಿಯಾನವು ಮಹತ್ವದ ಉಪಕ್ರಮವಾಗಿದೆ. ದೆಹಲಿ ಸರ್ಕಾರ ಈ ದಿಕ್ಕಿನಲ್ಲಿ ಸಕಾರಾತ್ಮಕ ಹೆಜ್ಜೆ ಇಟ್ಟಿದೆ ಮತ್ತು ಈ ಪ್ರದೇಶದ ಐದು ಸಾವಿರ ಹೆಕ್ಟೇರ್ ಅನ್ನು ಅರಣ್ಯ ಭೂಮಿಯಾಗಿ ಘೋಷಿಸಿದೆ ಎಂದು ಹೇಳಿದರು. ಮುಂದಿನ ನಾಲ್ಕು ವರ್ಷಗಳಲ್ಲಿ ಆರು ಸಾವಿರದ ೩೦೦ ಹೆಕ್ಟೇರ್ ಹಸಿರು ವಲಯವನ್ನು ಅರಣ್ಯ ಭೂಮಿಯಾಗಿ ಸಂಪೂರ್ಣವಾಗಿ ಅಭಿವೃದ್ಧಿಪಡಿಸಲು ಮತ್ತು ಅದರ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಮತ್ತು ದೆಹಲಿ ಸರ್ಕಾರ ಸಂಕಲ್ಪಿಸಿದೆ ಎಂದು ಅವರು ತಿಳಿಸಿದರು.

<><><>

ಅಮೆರಿಕದ ಅಟ್ಲಾಂಟದಲ್ಲಿ ಇಂದು ರಾತ್ರಿ ನಡೆಯುವ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ೧೬ರ ಸುತ್ತಿನ ಪಂದ್ಯದಲ್ಲಿ ಅರ್ಜೆಂಟೀನಾ ತಂಡ, ಈಜಿಫ್ಟ್ ವಿರುದ್ಧ ಸೆಣಸಲಿದೆ. ನಂತರ ವ್ಯಾಂಕೋವರ್‌ನಲ್ಲಿ ನಡೆಯುವ ೧೬ರ ಸುತ್ತಿನ ಮತ್ತೊಂದು ಪಂದ್ಯದಲ್ಲಿ ಸ್ವಿಟ್ಜರ್‌ಲೆಂಡ್ ಮತ್ತು ಕೊಲಂಬಿಯಾ ತಂಡಗಳು ಮುಖಾಮುಖಿಯಾಗಲಿವೆ. ಇದಕ್ಕೂ ಮುನ್ನ ಸಿಯಾಟಲ್‌ನಲ್ಲಿ ಇಂದು ನಡೆದ ೧೬ರ ಸುತ್ತಿನ ಪಂದ್ಯದಲ್ಲಿ ಅಮೆರಿಕ ತಂಡವನ್ನು ೪-೧ ಗೋಲುಗಳಿಂದ ಮಣಿಸಿ ಬೆಲ್ಜಿಯಂ ತಂಡ ಕ್ವಾರ್ಟರ್ ಫೈನಲ್‌ಗೆ ಪ್ರವೇಶಿಸಿದೆ. ಇದೇ ಶುಕ್ರವಾರ ಲಾಸ್ ಏಂಜಲೀಸ್ ಕ್ರೀಡಾಂಗಣದಲ್ಲಿ ನಡೆಯಲಿರುವ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಬೆಲ್ಜಿಯಂ ತಂಡ, ಸ್ಪೇನ್ ತಂಡವನ್ನು ಎದುರಿಸಲಿದೆ.

<><><><>

ಇಂಗ್ಲೆಂಡ್‌ನ ನಾಟಿಂಗ್‌ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್‌ನಲ್ಲಿ ಇಂದು ರಾತ್ರಿ ನಡೆಯಲಿರುವ ಐದು ಪಂದ್ಯಗಳ ಪುರುಷರ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ೩ನೇ ಪಂದ್ಯದಲ್ಲಿ ಭಾರತ ತಂಡ, ಆತಿಥೇಯ ಇಂಗ್ಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦ ಗಂಟೆಗೆ ಆರಂಭವಾಗಲಿದೆ.

<><><><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಗ-ಸೆನ್ಸೆಕ್ಸ್ ೧೦೪ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೮ ಸಾವಿರದ ೧೮೧ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೩೨ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೩೯೯ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೪ ರೂಪಾಯಿ ೯೬ ಪೈಸೆಯಷ್ಟಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>